ಇ) ಸಣ್ಣ ಕೈಗಾರಿಕಾ ಘಟಕಗಳಿಗೆ ರೂ. 81.00 ಕೋಟಿ ಹಣವನ್ನು ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ ವತಿಯಿಂದ ಬಾಂಡ್ ಮುಖಾಂತರ ಕ್ರೋಡೀಕರಿಸಿದ್ದು, ಬಿಡುಗಡೆಗೆ ಕ್ರಮ ತೆಗೆದುಕೊಳ್ಳಲಾಗುತ್ತಿದೆ.

ಈ) ಬಸವಕಲ್ಯಾಣದಲ್ಲಿ ರಾಷ್ಟ್ರೀಯ ಹೆದ್ದಾರಿ 9 ಇದಕ್ಕೆ ಹೊಂದಿಕೊಂಡಂತೆ ಒಂದು ಕೈಗಾರಿಕಾಪ್ರದೇಶ ಹಾಗೂ ಆಟೋ ನಗರ ಕೈಗಾರಿಕಾ ಪ್ರದೇಶವನ್ನು ಸ್ಥಾಪಿಸಿ ಆಸಕ್ತ ಉದ್ದಿಮೆಶೀಲರಿಗೆ ವಿದ್ಯುತ್, ನೀರಿನ ಸೌಕರ್ಯಗಳನ್ನು ಅಭಿವೃದ್ಧಿಪಡಿಸಿದ ಕೈಗಾರಿಕಾ ನಿವೇಶನಗಳನ್ನು ಒದಗಿಸಲು ವ್ಯವಸ್ಥೆ ಮಾಡಿದೆ. ಬಸವಕಲ್ಯಾಣ ತಾಲ್ಲೂಕಿನಲ್ಲಿ ಸಣ್ಣ ಕೈಗಾರಿಕೆಗಳನ್ನು ಉತ್ತೇಜಿಸಲು ಆಸಕ್ತಿ ಹೊಂದಿದ ಉದ್ದಿಮೆಶೀಲರಿಗೆ ಕೈಗಾರಿಕೆಗಳನ್ನು ಸ್ಥಾಪಿಸುವ ಬಗ್ಗೆ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಹಾಗೂ ಸರ್ಕಾರದ ಉತ್ತೇಜನ ಮತ್ತು ರಿಯಾಯಿತಿಗಳ ಕುರಿತು ಪ್ರಚಾರ ಕಾರ್ಯಕ್ರಮ, ಉದ್ಯಮಶೀಲ ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ. ಅಂತಿಮ ವರ್ಷದಲ್ಲಿ ವ್ಯಾಸಂಗ ಮಾಡುತ್ತಿರುವ ಪಾಲಿಟಿಕ್ನಿಕ್, ಐ.ಟಿ.ಐ ಇಂಜಿನಿಯರಿಂಗ್ ಕಾಲೇಜಿನ ವಿದ್ಯಾರ್ಥಿಗಳಿಗೂ ಸಹ ಸ್ವಯಂ ಉದ್ಯೋಗದ ಬಗ್ಗೆ ಮಾಹಿತಿಯನ್ನು ನೀಡಿ ಸ್ವಯಂ ಉದ್ಯೋಗದ ಬಗ್ಗೆ ಮಾಹಿತಿಯನ್ನು ನೀಡಿ ಸ್ವತಃ ಕೈಗಾರಿಕೆಗಳನ್ವಯ ಸ್ಥಾಪಿಸುವಲ್ಲಿ ಪ್ರೋತ್ಸಾಹ ನೀಡಲಾಗುತ್ತಿದೆ.

ಉ) 2001–06ನೇ ಸಾಲಿನ ರಾಜ್ಯ ಕೈಗಾರಿಕಾ ನೀತಿಯಂತೆ ಬಸವಕಲ್ಯಾಣ ತಾಲ್ಲೂಕನ್ನು ಹಿಂದುಳಿದ ; ಅಭಿವೃದ್ಧಿ ಹೊಂದುತ್ತಿರುವ ಪ್ರದೇಶ ಡಿ ವಲಯದಲ್ಲಿ ಸೇರಿಸಲಾಗಿದ್ದು ಈ ತಾಲ್ಲೂಕಿನಲ್ಲಿ ಪ್ರಾರಂಭಿಸುವ ಕೈಗಾರಿಕೆಗಳಿಗೆ ಶೇ. 25 ರಷ್ಟು (ಹಾಗೂ ಎಸ್‌ಸಿ/ಎಸ್‌ಟಿ ಮತ್ತು ಮಹಿಳೆಯರು ಸ್ಥಾಪಿಸುವ ಘಟಕವಾದಲ್ಲಿ ಶೇ. 5 ಹೆಚ್ಚುವರಿ ಸಹಾಯಧನ) ಅಲ್ಲದೆ 2 ಎಕರೆವರೆಗೂ ಕೈಗಾರಿಕೇತರ ಉದ್ದೇಶಕ್ಕೆ ಪರಿವರ್ತಿಸಲು ಭೂ ಪರಿವರ್ತನಾ ಶುಲ್ಕ ವಿನಾಯಿತಿ ಹಾಗೂ ಪ್ರದೇಶ ತೆರಿಗೆಗಳ ವಿನಾಯಿತಿಗಳು ಲಭ್ಯವಿರುತ್ತದೆ.

ಬಸವ ಕಲ್ಯಾಣಕ್ಕೆ ಐ.ಡಿ.ಎಸ್.ಎಂ.ಟಿ ಯೋಜನೆ.

158(370) ಶ್ರೀ ಮಲ್ಲಿಕಾರ್ಜುನ್ ಸಿದ್ರಾಮಪ್ಪ ಕೂಬ.(ಬಸವಕಲ್ಯಾಣ) : ಮಾನ್ಯ ಪೌರಾಡಳಿತ ಹಾಗೂ ಕೆ.ಯು.ಐ.ಡಿ.ಎಫ್.ಸಿ. ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ಬಸವಕಲ್ಯಾಣಕ್ಕೆ ಐ.ಡಿ.ಎಸ್.ಎಂ.ಟಿ ಯೋಜನೆಯಡಿಯಲ್ಲಿ ಕಳೆದ 4 ವರ್ಷಗಳಲ್ಲಿ ಬಿಡುಗಡೆಯಾಗಿರುವ ಹಣದ ಮೊತ್ತವೆಷ್ಟು ; ಹಾಗೂ ಈ ಹಣದಲ್ಲಿ ಈ ಅವಧಿಯಲ್ಲಿ ತೆಗೆದುಕೊಂಡಿರುವ ಕಾಮಗಾರಿಗಳಾವುವು (ವಿವರಗಳನ್ನು ನೀಡುವುದು) ;

ಆ) ಈ ಕ್ಷೇತ್ರಕ್ಕೆ ಮೇಲ್ಕಂಡ ಯೋಜನೆಯಡಿ ಇನ್ನು ಎಷ್ಟು ಮೊತ್ತದ ಹಣ ಬರಬೇಕಾಗಿದೆ ;

ಇ) ಇದಕ್ಕಾಗಿ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆಯೇ ;

ಈ) ಇಲ್ಲದಿದ್ದಲ್ಲಿ, ಅದಕ್ಕೆ ಕಾರಣಗಳೇನು ;

ಉ) ಪ್ರಸ್ತಾವನೆಯನ್ನು ಸಲ್ಲಿಸಿದ್ದಲ್ಲಿ, ಯಾವಾಗ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ ;

ಊ) ಬಸವಕಲ್ಯಾಣ ಮತಕ್ಷೇತ್ರಕ್ಕೆ ಐ.ಡಿ.ಎಸ್.ಎಂ.ಟಿ. ಯೋಜನೆಯಡಿಯಲ್ಲಿ ಬರಬೇಕಾದ ಹಣ ಬರದೇ ಇರುವುದರಿಂದ ಅಭಿವೃದ್ಧಿ ಕೆಲಸಗಳು ಕುಂಠಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಋ) ಬಂದಿದ್ದಲ್ಲಿ, ತುರ್ತಾಗಿ ಈ ಹಣವನ್ನು ನೀಡಲು ಸರ್ಕಾರ ಅನುಸರಿಸುವ ಕ್ರಮಗಳೇನು?

ಶ್ರೀ ಎಸ್.ಆರ್. ಮೋರೆ (ಪೌರಾಡಳಿತ ಹಾಗೂ ಕೆ.ಯು.ಐ.ಡಿ.ಎಫ್.ಸಿ ಸಚಿವರು):

ಅ) ಬಸವಕಲ್ಯಾಣಕ್ಕೆ ಐ.ಡಿ.ಎಸ್.ಎಂ.ಟಿ. ಯೋಜನೆಯಡಿಯಲ್ಲಿ ಕಳೆದ 4 ವರ್ಷಗಳಲ್ಲಿ ಯಾವುದೇ ಅನುದಾನ ಬಿಡುಗಡೆಯಾಗಿರುವುದಿಲ್ಲ.

ಆ) ಅನ್ವಯಿಸುವುದಿಲ್ಲ.

ಇ) ಹೌದು.

ಈ) ಅನ್ವಯಿಸುವುದಿಲ್ಲ.

ಉ) ಹೌದು, ದಿನಾಂಕ 9.7.2004 ರಂದು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ.

ಊ) ಬಸವಕಲ್ಯಾಣ ಪಟ್ಟಣಕ್ಕೆ ಹೊಸ ಮಾರ್ಗಸೂಚಿಯನ್ವಯ ಕೇಂದ್ರ ಸರ್ಕಾರಕ್ಕೆ ಯೋಜನಾವರದಿಯನ್ನು ಸಲ್ಲಿಸಲಾಗಿದ್ದು ಮಂಜೂರಾತಿ ನಿರೀಕ್ಷಿಸಲಾಗಿದೆ.

ಋ) ಅನ್ವಯಿಸುವುದಿಲ್ಲ.

ಬೆಂಗಳೂರು ಸುತ್ತಮುತ್ತ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ಸ್ವಾಧೀನಪಡಿಸಿಕೊಂಡ ಭೂಮಿ.

159(366) ಶ್ರೀ ಕಟ್ಟಾ ಸುಬ್ರಹ್ಮಣ್ಯ ನಾಯ್ಡು.(ಶಿವಾಜಿನಗರ) : ಮಾನ್ಯ ಭಾರಿ, ಮಧ್ಯಮ ಹಾಗೂ ಸಣ್ಣ ಕೈಗಾರಿಕೆಗಳು ಮತ್ತು ಮೂಲಭೂತ ಸೌಕರ್ಯ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ಕಳೆದ ಒಂದು ವರ್ಷದಿಂದ ಬೆಂಗಳೂರು ಸುತ್ತಮುತ್ತ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯು ಕೈಗಾರಿಕೆಗಳಿಗಾಗಿ ಖಾಸಗೀ ಭೂಮಾಲೀಕರಿಂದ ಸ್ವಾಧೀನಪಡಿಸಿಕೊಂಡ ಜಮೀನೆಷ್ಟು;

ಆ) ಇವುಗಳಲ್ಲಿ ಎಷ್ಟು ಎಕರೆ ಜಮೀನುಗಳನ್ನು ಸ್ವಾಧೀನ ಪ್ರಕ್ರಿಯೆ ಮುಗಿಯುವುದಕ್ಕೆ ಮುಂಚೆ ಸ್ವಾಧೀನ ಪ್ರಕ್ರಿಯೆಯಿಂದ ಕೈಬಿಡಲಾಗಿದೆ ; (ಪೂರ್ತಿ ವಿವರ ನೀಡುವುದು) ;

ಇ) ಈ ರೀತಿ ಸ್ವಾಧೀನ ಪ್ರಕ್ರಿಯೆಯಿಂದ ಕೈ ಬಿಡಲು ಕಾರಣಗಳೇನು ?

ಶ್ರೀ ಪಿ.ಜಿ.ಆರ್. ಸಿಂಧ್ಯಾ (ಭಾರೀ, ಮಧ್ಯಮ ಹಾಗೂ ಸಣ್ಣ ಕೈಗಾರಿಕೆಗಳು ಮತ್ತು ಮೂಲಭೂತ ಸೌಕರ್ಯ ಅಭಿವೃದ್ಧಿ ಸಚಿವರು) :

ಅ) ಕಳೆದ ಒಂದು ವರ್ಷದಲ್ಲಿ (1-4-2003 ರಿಂದ 30-6-2004) ಬೆಂಗಳೂರು ಸುತ್ತಮುತ್ತ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯು 735 ಎಕರೆ 15 ಗುಂಟೆ ಖಾಸಗೀ ಜಮೀನನ್ನು ಕೈಗಾರಿಕೆಗಳಿಗಾಗಿ ಸ್ವಾಧೀನಪಡಿಸಿಕೊಳ್ಳಲಾಗಿದೆ.

ಆ) ಇವುಗಳಲ್ಲಿ ಯಾವುದನ್ನು ಭೂ ಸ್ವಾಧೀನದಿಂದ ಕೈಬಿಟ್ಟಿರುವುದಿಲ್ಲ. ಆದರೆ, ಪ್ರಾರಂಭಿಕ ಅಧಿಸೂಚನೆಯಿಂದ ಸರ್ಕಾರವು ಸ್ವಾಧೀನ ಕೈಬಿಟ್ಟಿದ್ದ 247 ಎಕರೆ 26 1/4 ಗುಂಟೆ ಜಮೀನಿಗೆ ಕಲಂ 4ರ ಅಧಿಸೂಚನೆಯನ್ನು ಹೊರಡಿಸಿರುತ್ತದೆ. (ವಿವರ ಲಗತ್ತಿಸಿದೆ)

ಇ) ಕಂಪೆನಿಗಳು ಜಮೀನುಗಳ ಅವಶ್ಯಕತೆ ಇಲ್ಲವೆಂದು ತಿಳಿಸಿದ ಕಾರಣದಿಂದ ಹಾಗೂ ಭೂಮಾಲೀಕರು ಸರ್ಕಾರಕ್ಕೆ ಮನವಿಗಳನ್ನು ಸಲ್ಲಿಸಿ ಭೂಸ್ವಾಧೀನದಿಂದ ಕೈಬಿಡಲು ಕೋರಿದ್ದ ಹಾಗೂ ಇತರೆ ಕಾರಣಗಳಿಂದ ಸರ್ಕಾರದಲ್ಲಿ ಪರಿಶೀಲಿಸಿ ಭೂಸ್ವಾಧೀನದಿಂದ ಕೈಬಿಡಲಾಗಿದೆ.